## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸಾರ್ವಜನಿಕ/ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕ್ ನ್ಯಾಯದಗುಂಟೆ ಗ್ರಾಮ ಪಂಚಾಯತ್‌ನ ಕಾರ್ಯದರ್ಶಿ ಮತ್ತು ಪ್ರಭಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ ರಾಮಾಂಜಿನಮ್ಮ ರವರು ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ- ಆದೇಶ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ–2351/2016/ಎಆರ್‌ಎಲ್‌ಓ1, ದಿನಾಂಕ: 27–04–2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ–2351/2016/ಸನಿಕಾಸ–1, ದಿನಾಂಕ: 17–03–2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 27–04–2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 7(2) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು, ನ್ಯಾಯದಗುಂಟೆ ಗ್ರಾಮ ಪಂಚಾಯತ್‌ನ 1) ಮಾಜಿ ಅಧ್ಯಕ್ಷರಾಗಿದ್ದ ಶ್ರೀ ಗೋವಿಂದಪ್ಪ ಮತ್ತು 2) ಕಾರ್ಯದರ್ಶಿ ಮತ್ತು ಪ್ರಭಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ ರಾಮಾಂಜಿನಮ್ಮ (1 ಮತ್ತು 2ನೇ "ಎದುರುದಾರರು" ಎಂದು ಕ್ರಮವಾಗಿ ಕರೆಯಲ್ಪಡುತ್ತಾರೆ) ರವರು ದೂರುದಾರರಾದ ಶ್ರೀ ಎನ್.ಆರ್.ನಾಗಭೂಷಣ ಬಿನ್ ಎನ್ ರಂಗಪ್ಪ, ನ್ಯಾಯದಗುಂಟೆ ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ರವರು ಎದುರುದಾರರುಗಳನ್ನು ಭೇಟಿಯಾದಾಗ ದುರ್ನಡತೆ ತೋರಿ ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 7(2) ರನ್ವಯ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ತನಿಖೆ ತೆಗೆದುಕೊಂಡಾಗ, ಈ ಕೆಳಗೆ ಹೇಳಿದ ಸಂಗತಿಗಳು ಮೇಲ್ನೋಟಕ್ಕೆ ಕಂಡು ಬರುತ್ತದೆ.

**ಅ)** ಪಾವಗಡ ತಾಲ್ಲೂಕ್ ನ್ಯಾಯದಗುಂಟೆ ಗ್ರಾಮ ಪಂಚಾಯತಿಗೆ 12 ಮತ್ತು 13 ನೇ ಹಣಕಾಸಿನ ಯೋಜನೆಯಡಿಯಲ್ಲಿ ಎಂಜಿಎನ್‌ಆರ್‌ಜಿಎ ಯೋಜನೆಯ ನಿರ್ಮಲ ಭಾರತ ಶೌಚಾಲಯ ಅನುಷ್ಠಾನದಲ್ಲಿ ಹಾಗೂ ಬೋರ್‌ವೆಲ್‌ಗಳಲ್ಲಿ ಪಂಪ್ ಮೋಟಾರ್ ನಿರ್ವಹಣೆಯಲ್ಲಿ ಮತ್ತು ನೌಕರರ ನೇಮಕಾತಿಯಲ್ಲಿ ಎದುರುದಾರರು ಬಾರಿ ಅವ್ಯವಹಾರ ಮಾಡಿ ಹಣ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ ದೂರುದಾರರು ದೂರು ಸಲ್ಲಿಸಿದ್ದಾರೆ.

**ಆ)** ಸದರಿ ದೂರಿನ ಅನುಸಾರ ಪೋಲಿಸ್ ನಿರೀಕ್ಷಕರು, ಕರ್ನಾಟಕ ಲೋಕಾಯುಕ್ತ, ತುಮಕೂರು ರವರು ಠಾಣಾ ಮೊಕದ್ದಮೆ ಸಂ:28/2014ರಂತೆ ಪಿಸಿ ಕಾಯಿದೆ, ಕಲಂ 1988 ಕಲಂ 13(1)(ಸಿ) ಸಹ ಕಲಂ 13(2)ರಂತೆ ಹಾಗೂ 406, 409, 420, 470, 471, 477 ಸಹ ಕಲಂ 120ಬಿ ಐಪಿಸಿ ರಂತೆ ಎದುರುದಾರರ ವಿರುದ್ಧ ಪ್ರಥಮ ವರ್ತಮಾನ ವರದಿ ದಾಖಲಾಗಿದೆ.

**ಇ)** ಈ ಬಗ್ಗೆ ತನಿಖಾಧಿಕಾರಿಗಳು 2ನೇ ಎದುರುದಾರರ ಕಛೇರಿಯಲ್ಲಿಯ ಕಡತಗಳನ್ನು ಪಡೆದು ಹಾಗೂ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದು ಅವುಗಳ ಆಧಾರದ ಮೇಲೆ ಆಧಾರದ ಮೇಲೆ ಎದುರುದಾರರು 12 ಮತ್ತು 13ನೇ ಹಣಕಾಸು ಯೋಜನೆಯ ಕಾರ್ಯಸೂಚಿಯನ್ನು ಪಾಲಿಸದೇ ದಾಖಲಾತಿಗಳನ್ನು ವ್ಯತ್ಯಾಸಗೊಳಿಸಿ ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದ ಕಾರಣ ದೋಷಾರೋಪಣ ಪಟ್ಟಿ ಸಲ್ಲಿಸಿದೆ.

**ಈ)** ಸಾಕ್ಷಿದಾರರ ಹೇಳಿಕೆಗಳು, ದೂರು ಅರ್ಜಿ ಹಾಗೂ ತನಿಖಾಧಿಕಾರಿಯವರು ಸಂಗ್ರಹಿಸಿದ ದಾಖಲೆ ಮತ್ತು ಇತರ ಅಂಶಗಳು, ಎದುರುದಾರರ ಸತತವಾದ ದುರ್ನಡತೆಯನ್ನು ತೋರಿದೆ.

ಮೇಲೆ ಹೇಳಿದ ಕಾರಣಕ್ಕಾಗಿ ಎದುರುದಾರರ ಮೇಲೆ ಶಿಸ್ತು ಕ್ರಮಕ್ಕಾಗಿ ಇಲಾಖಾ ವಿಚಾರಣೆ ನಡೆಸಲು ಸಂಬಂಧಪಟ್ಟ ಪ್ರಾಧಿಕಾರಕ್ಕೆ ಏಕೆ ಶಿಫಾರಸ್ಸು ಮಾಡಬಾರದೆನ್ನುವ ಬಗ್ಗೆ ಎದುರುದಾರರುಗಳಿಂದ ಕಾರಣ ಪಡೆಯಲು

ಪರಿವೀಕ್ಷಣಾ ಟಿಪ್ಪಣಿಯನ್ನು ಎದುರುದಾರರುಗಳಿಗೆ ಕಳುಹಿಸಲಾಗಿ, 1ನೇ ಎದುರುದಾರರು ತಮ್ಮ ಉತ್ತರವನ್ನು ಸಲ್ಲಿಸಿಲ್ಲ. 2ನೇ ಎದುರುದಾರರು ಪರಿವೀಕ್ಷಣಾ ಟಿಪ್ಪಣಿಗೆ ತಮ್ಮ ಉತ್ತರವನ್ನು ಸಲ್ಲಿಸಿದ್ದಾರೆ. ಆದರೆ, 2ನೇ ಎದುರುದಾರರು ನೀಡಿರುವ ಉತ್ತರದಲ್ಲಿ, ಅವರ ವಿರುದ್ಧದ ನಡುವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣ ತೋರಿಸಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ, 2ನೇ ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಒಂದನೇ ಎದುರುದಾರರು ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರಾಗಿರುವುದರಿಂದ, ಸದರಿಯವರ ವಿರುದ್ಧದ ನಡುವಳಿಗಳನ್ನು ಕೈಬಿಡಲಾಗಿದೆ.

ಆದ್ದರಿಂದ 2ನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಮದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿರುವುದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀಮತಿ ರಾಮಾಂಜಿನಮ್ಮ, ಕಾರ್ಯದರ್ಶಿ ಮತ್ತು ಪ್ರಭಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ನ್ಯಾಯದಗುಂಟೆ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕ್, ತುಮಕೂರು ಜಿಲ್ಲೆಯಾದ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14–ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/398/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 17–05–2017.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀಮತಿ ರಾಮಾಂಜಿನಮ್ಮ, ಕಾರ್ಯದರ್ಶಿ ಮತ್ತು ಪ್ರಭಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ನ್ಯಾಯದಗುಂಟೆ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕ್, ತುಮಕೂರು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ–8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ:</u>**

1) ಮಹಾಲೇಖಪಾಲರು (ಲೆ ಮತ್ತು ಹ), ಕರ್ನಾಟಕ, ಬೆಂಗಳೂರು

3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 372 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ.
6) ಶ್ರೀಮತಿ ರಾಮಾಂಜಿನಮ್ಮ, ಕಾರ್ಯದರ್ಶಿ ಮತ್ತು ಪ್ರಭಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿ, ನ್ಯಾಯದಗುಂಟೆ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕ್, ತುಮಕೂರು ಜಿಲ್ಲೆ.
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.